# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 2796 (387)
ಸದಸ್ಯರ ಹೆಸರು : ಶ್ರೀ ಪ್ರಕಾಶ್ ಕೆ. ರಾಥೋಡ್(ನಾಮನಿರ್ದೇಶನ ಹೊಂದಿದವರು)
ಉತ್ತರಿಸುವವರು : ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು
ಉತ್ತರಿಸುವ ದಿನಾಂಕ : 29.03.2022

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಸ್ಥಾಪನೆಯಾಗ ಬೇಕಾಗಿದ್ದ ಹಲವಾರು ಕಂಪನಿಗಳು ತಮಿಳುನಾಡು ರಾಜ್ಯಕ್ಕೆ ಸ್ಥಳಾಂತರಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಜ್ಯದಲ್ಲಿ ಬಂಡವಾಳ ಹೂಡಿಕೆಯನ್ನು ಉತ್ತೇಜಿಸಲು ಪಾರದರ್ಶಕ ಮತ್ತು ಸುಸ್ಥಿರ ನೀತಿ ನಿಯಮಗಳ ಜಾರಿ ಮೂಲಕ ಕರ್ನಾಟಕ ರಾಜ್ಯವು ಕೈಗಾರಿಕೆಗಳ ಅಭಿವೃದ್ಧಿಯಲ್ಲಿ ಸದಾ ಮುಂದಿದೆ.<br><br>2021-2022ರ ಆರ್ಥಿಕ ಸಾಲಿನಲ್ಲಿ ಸತತ ಮೂರು ತ್ರೈಮಾಸಿಕಗಳಲ್ಲಿ, ಕರ್ನಾಟಕವು ದೇಶದಲ್ಲೇ ಅತಿ ಹೆಚ್ಚು ವಿದೇಶಿ ನೇರ ಬಂಡವಾಳ ಆಕರ್ಷಿಸಿದೆ. ಡಿಸೆಂಬರ್ 2021ರ ವೇಳೆಗೆ ಕರ್ನಾಟಕಕ್ಕೆ 1.27 ಲಕ್ಷ ಕೋಟಿ ರೂ. ವಿದೇಶ ನೇರ ಬಂಡವಾಳ ಹರಿದು ಬಂದಿದೆ. ಇದು ದೇಶದ ಒಟ್ಟಾರೆ 3.19 ಲಕ್ಷ ಕೋಟಿ ರೂಪಾಯಿಯ ವಿದೇಶಿ ನೇರ ಹೂಡಿಕೆಯ ಶೇಕಡಾ 39.9 ರಷ್ಟಿದೆ.<br><br>2021-2022ರ ಆರ್ಥಿಕ ಸಾಲಿನಲ್ಲಿ ಏಕ ಗವಾಕ್ಷಿ ಸಮಿತಿ ಸಭೆಗಳಲ್ಲಿ ಒಟ್ಟು 561 ಯೋಜನೆಗಳಿಗೆ ಅನುಮೋದನೆ ನೀಡಲಾಗಿದ್ದು, ಇವುಗಳಿಂದ ರೂ. 42,714 ಕೋಟಿ ಬಂಡವಾಳ ಹೂಡಿಕೆಯಾಗಲಿದ್ದು, ಸುಮಾರು 127203 ಜನರಿಗೆ ಉದ್ಯೋಗಾವಕಾಶಗಳು ಲಭ್ಯವಾಗಲಿದೆ. |
| ಆ | ಕಂಪನಿಗಳು ಸ್ಥಳಾಂತರಗೊಳ್ಳಲು ರಾಜ್ಯದಲ್ಲಿ ಬೇಕಾಗಿರುವಂತಹ ಮೂಲಭೂತ ಸೌಕರ್ಯ ಸೃಷ್ಟಿ ಆಗುತ್ತಿಲ್ಲವೆಂದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸಂಶೋಧನೆ ಮತ್ತು ಅಭಿವೃದ್ಧಿ, ನಾವಿನ್ಯತೆ, ಉತ್ಕೃಷ್ಟ ಮಾನವ ಸಂಪನ್ಮೂಲ, ಅತಿ ಹೆಚ್ಚಿನ ಇಂಜಿನಿಯರಿಂಗ್, ಐಟಿಐ ಕಾಲೇಜುಗಳಿದ್ದು, ಮೂಲಸೌಕರ್ಯವೂ ಉತ್ತಮವಾಗಿದ್ದು, ಕೈಗಾರಿಕೆಗಳ ಸ್ಥಾಪನೆಗೆ ರಾಜ್ಯದಲ್ಲಿ ಪೂರಕ ಪರಿಸರವಿರುತ್ತದೆ.<br><br>ಕೋವಿಡ್-19ರ ನಂತರ ಹೊಸ ಅವಕಾಶಗಳನ್ನು ಗಮನದಲ್ಲಿಟ್ಟುಕೊಂಡು ಹಾಗೂ ಬೃಹತ್ ಬಂಡವಾಳವನ್ನು ಎಲ್ಲಾ ಕ್ಷೇತ್ರಗಳಲ್ಲಿ ರಾಜ್ಯಕ್ಕೆ ಆಕರ್ಷಿಸುವ ನಿಟ್ಟಿನಲ್ಲಿ ಹೊಸ ಕೈಗಾರಿಕಾ ನೀತಿ 2020-25ನ್ನು ಹೊರತಂದಿದ್ದು, ಈ ನೀತಿಯಲ್ಲಿ ಹಲವಾರು ಸುಧಾರಣೆಗಳನ್ನು ತಂದಿದ್ದು, ಮುಖ್ಯವಾಗಿ ಭೂಮಿ ಸಂಗ್ರಹಣೆ, ಕಾರ್ಮಿಕ ಕಾನೂನುಗಳ ಸುಧಾರಣೆ ಹಾಗೂ ಆಕರ್ಷಕ ರಿಯಾಯಿತಿ ಹಾಗೂ ಉತ್ತೇಜನಗಳನ್ನು ನೀಡಲಾಗಿದೆ. |

| | | |
|---|---|---|
| | | ರಾಜ್ಯದಲ್ಲಿ ಉದ್ಯಮ ಸ್ನೇಹಿ ವಾತವಾರಣ ಸೃಷ್ಟಿಸುವುದು, ಕೈಗಾರಿಕೆಗಳ ಆರಂಭ ಪ್ರಕ್ರಿಯೆಯನ್ನು ಇನ್ನಷ್ಟು ಸರಳಗೊಳಿಸಲು ಹಾಗೂ ಸುಲಲಿತ ವ್ಯವಹಾರಕ್ಕೆ ಅನುಕೂಲ ಮಾಡಿಕೊಡುವ ನಿಟ್ಟಿನಲ್ಲಿ ಅಫಿಡವಿಟ್ ಬೇಸ್ಡ್ ಕ್ಲಿಯರೆನ್ಸ್ (ಎಬಿಸಿ) ಯೋಜನೆಯನ್ನು ರಾಜ್ಯ ಸರ್ಕಾರ ಜಾರಿಗೊಳಿಸಿದೆ.<br><br>ಪ್ಲಗ್-ಅಂಡ್-ಪ್ಲೇ ಮೂಲಸೌಕರ್ಯವು ಹೂಡಿಕೆದಾರರಿಗೆ. ಅದರಲ್ಲೂ ವಿಶೇಷವಾಗಿ ಜಾಗತಿಕ ಹೂಡಿಕೆದಾರರಿಗೆ ತನ್ನ ಪ್ರಮುಖ ಅವಶ್ಯಕತೆಗಳಲ್ಲಿ ಒಂದಾಗಿದೆ.<br><br>ಇದರ ಪರಿಣಾಮವಾಗಿ, ಇಂಡೋಸ್ಪೇಸ್ ಸಂಸ್ಥೆಯು (ಮೆ॥ ನಿಹಿತ್ ಲಾಜಿಸ್ಟಿಕ್ಸ್) 1.5 ಮಿಲಿಯನ್ ಚದರಡಿ ಬಿಲ್ಟ್-ಅಪ್ ಪ್ರದೇಶವನ್ನು ಅಭಿವೃದ್ಧಿಪಡಿಸಲು ಮಿಂಡಹಳ್ಳಿ ಕೈಗಾರಿಕಾ ಪ್ರದೇಶ, ನರಸಾಪುರದ 50 ಎಕರೆಗಳಲ್ಲಿ ಪ್ಲಗ್-ಅಂಡ್-ಪ್ಲೇ ಕೈಗಾರಿಕಾ ಪಾರ್ಕ್ ಅಭಿವೃದ್ಧಿಪಡಿಸಲು ದಿನಾಂಕ: 09.11.2021 ರಂದು ನಡೆದ ರಾಜ್ಯ ಮಟ್ಟದ ಏಕಗವಾಕ್ಷಿ ಅನುಮೋದನಾ ಸಮಿತಿ ಸಭೆಯಲ್ಲಿ ಅನುಮೋದನೆ ನೀಡಲಾಗಿದೆ.<br><br>ರಾಜ್ಯದಲ್ಲಿ ಬಂಡವಾಳ ಹೂಡಲು ಆಸಕ್ತಿ ತೋರುವ ಕೈಗಾರಿಕೆಗಳ ಯೋಜನೆಗಳಿಗೆ ಸಿಗುವ ಮೂಲಭೂತ ಸೌಕರ್ಯಗಳು ಹಾಗೂ ರಿಯಾಯಿತಿ ಮತ್ತು ಉತ್ತೇಜನಗಳ ಕುರಿತು ವಿವರವಾದ ಮಾಹಿತಿಗಳನ್ನು ನೀಡಲಾಗುತ್ತಿದೆ. |
| ಇ | ರಾಜ್ಯದಲ್ಲಿ ಹೂಡಿಕೆ ಮಾಡಲು ಕಂಪನಿಗಳಿಗೆ ಭೂಮಿಯ ಬೆಲೆಯು ದುಪ್ಪಟ್ಟು ಆಗಿದ್ದು, ಅದನ್ನು ಕಡಿಮೆ ಮಾಡಲು ಹಾಗೂ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? | ಕೆ.ಐ.ಎ.ಡಿ.ಬಿ. ಸಂಸ್ಥೆಯು ಒಂದು ಲಾಭರಹಿತ ಸಂಸ್ಥೆಯಾಗಿರುತ್ತದೆ.<br><br>ಕೈಗಾರಿಕಾ ಪ್ರದೇಶಗಳಲ್ಲಿ ಉದ್ದಿಮೆದಾರರಿಗೆ ನಿವೇಶನ ದರವನ್ನು ಭೂಸ್ವಾಧೀನ ವೆಚ್ಚ, ಕಾಮಗಾರಿ ವೆಚ್ಚ ಹಾಗೂ ಆಡಳಿತಾತ್ಮಕ ವೆಚ್ಚಗಳನ್ನು ಸೇರಿಸಿ ನಿಗದಿಪಡಿಸಲಾಗುತ್ತದೆ. ಸದರಿ ದರಗಳಲ್ಲಿ ಯಾವುದೇ ಲಾಭಾಂಶ ಒಳಗೊಂಡಿರುವುದಿಲ್ಲ.<br><br>ಕೈಗಾರಿಕೆಗಳು ಹೂಡುವ ಸ್ಥಿರಾಸ್ತಿ ಬಂಡವಾಳದಲ್ಲಿ, ನಿವೇಶನ/ಭೂಮಿಯ ಬೆಲೆಯು ಒಳಗೊಂಡಿದ್ದು, ಕೈಗಾರಿಕಾ ನೀತಿ 2020-25, ಕರ್ನಾಟಕ ಎಲೆಕ್ಟ್ರಿಕ್ ವೆಹಿಕಲ್ ಪಾಲಿಸಿ-2017 ಹಾಗೂ ಇಎಸ್‌ಡಿಎಂ ಪಾಲಿಸಿ-2020ರಲ್ಲಿ ನಿವೇಶನ/ಭೂಮಿ ಮೇಲೆ ಸಹ ಸಹಾಯಧನ ಒದಗಿಸಲಾಗುತ್ತಿದ್ದು, ಇದರಿಂದ ರಾಜ್ಯದಲ್ಲಿ ಹೂಡಿಕೆ ಮಾಡುವ ಕಂಪನಿಗಳಿಗೆ ಭೂಮಿಯ ಬೆಲೆ ಕಡಿಮೆಯಾಗುತ್ತದೆ. |

**ಸಿಐ 99 ಎಸ್‌ಪಿಐ 2022**

(ಡಾ॥ ಮುರುಗೇಶ ಆರ್. ನಿರಾಣಿ)
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು